## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 577 |
| ಸದಸ್ಯರ ಹೆಸರು | ಶ್ರೀ ಬಿ.ಜಿ. ಪಾಟೀಲ್<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 20.02.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಕ್ರಮ ಮರಳು ದಂಧೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿರುತ್ತದೆ.<br>• ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಉಸ್ತುವಾರಿ ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ, 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 31-R (12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಮುಂದುವರೆದು, ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 43-A ರಂತೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಿಗೆ ದಂಡ ವಿಧಿಸಿ ವಸೂಲು ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ. |

| | | |
|---|---|---|
| | | • ಕಲಬುರಗಿ ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ ಮರಳು ಸಮಿತಿಯಿಂದ 10 ತಾತ್ಕಾಲಿಕ ತನಿಖಾ ಠಾಣೆಗಳನ್ನು ಪ್ರಾರಂಭಿಸಲಾಗಿದೆ ಹಾಗೂ "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ಕ್ರಮ ವಹಿಸಲಾಗುತ್ತಿದೆ.<br><br>• ಯಾದಗಿರಿ ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ ಮರಳು ಸಮಿತಿಯಿಂದ 02 ತಾತ್ಕಾಲಿಕ ತನಿಖಾ ಠಾಣೆಗಳನ್ನು ಪ್ರಾರಂಭಿಸಲಾಗಿದೆ. ಮುಂದುವರೆದು, ತಾಲ್ಲೂಕು ಮಟ್ಟದ ಚಾಲಿತದಳ ತಂಡವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮವಹಿಸಲಾಗುತ್ತಿದೆ.<br><br>• ಮೇಲ್ಕಂಡಂತೆ, ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಡೆಸುತ್ತಿರುವವರ ವಿರುದ್ಧ ಕ್ರಮ ವಹಿಸಲಾಗಿದ್ದು, ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾ ಮರಳು ಸಮಿತಿಗಳಿಂದ ಅನಧಿಕೃತ ಮರಳು ಗಣಿಗಾರಿಕೆಯಡಿ ಕೈಗೊಂಡ ಕ್ರಮದ ವಿವರಗಳನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |
| ಆ) | ಅಕ್ರಮ ಮರಳು ದಂಧೆಯಿಂದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನದಿ ತೀರಗಳು ಹಾಗೂ ಅರಣ್ಯ ಪ್ರದೇಶ ಬರಡು ಭೂಮಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ನದಿ ಹಾಗೂ ಅರಣ್ಯ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; | • ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿರುವ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆ ಅವಕಾಶ ಕಲ್ಪಿಸಿರುವುದಿಲ್ಲ.<br><br>• ಅರಣ್ಯೇತರ ನದಿ ಪಾತ್ರಗಳ ಪ್ರದೇಶಗಳಲ್ಲಿ ಮರಳು ಬ್ಲಾಕ್ ಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ಗುರುತಿಸಿ, ಸದರಿ ಮರಳು ಬ್ಲಾಕ್ ಗಳಿಗೆ ಗುತ್ತಿಗೆ / ಕಾರ್ಯಾದೇಶವನ್ನು ಮಂಜೂರು ಮಾಡುವ ಪೂರ್ವದಲ್ಲಿ ನಿಯಮಾನುಸಾರ ಸಂಬಂಧಪಟ್ಟ ಪ್ರಾಧಿಕಾರದಿಂದ ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆ / ಕಾರ್ಯದೇಶಗಳನ್ನು ಮಂಜೂರು ಮಾಡಲಾಗುತ್ತಿದೆ.<br><br>• ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳ ನದಿ ಪಾತ್ರಗಳಲ್ಲಿ ಅಕ್ರಮ ಗಣಿಗಾರಿಕೆಯಿಂದ ನದಿ ಪಾತ್ರಗಳು ಬರಡಾಗುತ್ತಿರುವ ಬಗ್ಗೆ ಯಾವುದೇ ವರದಿಗಳು ಸ್ವೀಕೃತವಾಗಿರುವುದಿಲ್ಲ. ಮುಂದುವರೆದು, ಅಕ್ರಮ ಮರಳು ಗಣಿಗಾರಿಕೆ ತಡೆಗಟ್ಟಲು ಸಂಬಂಧಪಟ್ಟ ಜಿಲ್ಲಾ ಮರಳು ಸಮಿತಿಗಳಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಮರಳು ಸಮಿತಿಗಳಿಂದ ಅನಧಿಕೃತ ಮರಳು ಗಣಿಗಾರಿಕೆಯಡಿ ಕೈಗೊಂಡ ಕ್ರಮದ ವಿವರಗಳನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |

. . . 3

| | | |
|---|---|---|
| ಇ) | ಅಕ್ರಮ ಮರಳು ದಂಧೆಯಿಂದ ಸರ್ಕಾರಕ್ಕೆ ದೊಡ್ಡ ಮೊತ್ತದ ಆದಾಯ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು? | • ಪ್ರಸ್ತುತ ಕಲಬುರಗಿ ಜಿಲ್ಲಾ ವ್ಯಾಪ್ತಿಯ ನದಿ ಪಾತ್ರಗಳಲ್ಲಿ ಸರ್ಕಾರಿ ಕಾಮಗಾರಿಗಳಿಗೆ 01, ಟೆಂಡರ್-ಕಂ-ಹರಾಜು ಮೂಲಕ 03, ಹಟ್ಟಿ ಚಿನ್ನದ ಗಣಿ ಕಂಪನಿ ಲಿಮಿಟೆಡ್ ಇವರಿಗೆ 02 ಹಾಗೂ ಪಟ್ಟಾ ಜಮೀನಿನಲ್ಲಿ 12 ಹಾಗೂ ಯಾದಗಿರಿ ಜಿಲ್ಲಾ ವ್ಯಾಪ್ತಿಯ ನದಿ ಪಾತ್ರದಲ್ಲಿ ಹಟ್ಟಿ ಚಿನ್ನದ ಗಣಿ ಕಂಪನಿ ಲಿಮಿಟೆಡ್ ರವರಿಗೆ 03 ಮತ್ತು ಪಟ್ಟಾ ಜಮೀನಿನಲ್ಲಿ 01 ಗುತ್ತಿಗೆ/ ಲೈಸನ್ಸ್/ ಕಾರ್ಯಾದೇಶ ಮಂಜೂರು ಮಾಡಲಾಗಿರುತ್ತದೆ.<br>• ಆದ್ಯಾಗ್ಯೂ, ಸದರಿ ಪ್ರದೇಶಗಳನ್ನು ಹೊರತುಪಡಿಸಿ ಜಿಲ್ಲೆಯ ನದಿ ಪಾತ್ರಗಳ ವ್ಯಾಪ್ತಿಯಲ್ಲಿ ಅಲ್ಲಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>• ಸದರಿ ಜಿಲ್ಲೆಗಳ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಉಪ ಪ್ರಶ್ನೆ (ಆ) ರಲ್ಲಿ ತಿಳಿಸಿರುವಂತೆ, ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ಕಟ್ಟುನಿಟ್ಟಿನ ಕ್ರಮವನ್ನು ಕೈಗೊಳ್ಳಲಾಗಿರುತ್ತದೆ. |

ಸಂಖ್ಯೆ ಸಿಐ -ಎಂಎಂಎನ್/50/2024

**(ಎಸ್.ಎಸ್. ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.

ಅನುಬಂಧ

ಕಳೆದ ಮೂರು ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಮರಳು ಸಮಿತಿಗಳಿಂದ ಅನಧಿಕೃತ ಮರಳು ಗಣಿಗಾರಿಕೆಯಡಿ ಕೈಗೊಂಡ ಕ್ರಮದ ವಿವರಗಳು

| ಜಿಲ್ಲೆ | ವರ್ಷ | ಅನಧಿಕೃತ ಮರಳು ಗಣಿಗಾರಿಕೆ | | | ಅನಧಿಕೃತ ಮರಳು ಸಾಗಾಣಿಕೆ | | | ಅನಧಿಕೃತ ಮರಳು ದಾಸ್ತಾನು | | |
|---|---|---|---|---|---|---|---|---|---|---|
| | | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ. ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ. ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ | ಪತ್ತೆ ಹಚ್ಚಿದ ಪ್ರಕರಣಗಳು | ವಿಧಿಸಿರುವ ದಂಡ (ರೂ. ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ |
| **1** | **2** | **3** | **4** | **5** | **6** | **7** | **8** | **9** | **10** | **11** |
| ಕಲಬುರಗಿ | 2021-22 | 4 | 0.70 | 2 | 288 | 48.36 | 168 | 29 | 4.54 | 23 |
| | 2022-23 | 2 | 0.53 | 1 | 194 | 35.76 | 87 | 26 | 2.91 | 22 |
| | 2023-24 | 0 | 0.00 | 0 | 214 | 55.87 | 121 | 14 | 0.00 | 14 |
| ಒಟ್ಟು | | **6** | **1.23** | **3** | **696** | **139.99** | **376** | **69** | **7.45** | **59** |
| ಯಾದಗಿರಿ | 2021-22 | 5 | 1.50 | 2 | 136 | 41.83 | 62 | 17 | 0.92 | 16 |
| | 2022-23 | 6 | 4.00 | 3 | 90 | 19.06 | 51 | 11 | 0.20 | 10 |
| | 2023-24 | 5 | 1.00 | 4 | 70 | 5.31 | 48 | 14 | 0.55 | 12 |
| ಒಟ್ಟು | | **16** | **6.50** | **9** | **296** | **66.20** | **161** | **42** | **1.67** | **38** |

C-I-MMN-50-2024

Deputy Director (Min. Admn)
Dept. of Mines & Geology
Bangalore-560001